ಶ್ರೀ ಎಂ. ಮಹದೇವ್ :- ಮಾನ್ಯ ಸದಸ್ಯರ ಸಲಹೆ ಬಹಳ ಅತ್ಯುತ್ತಮವಾಗಿದೆ. ಈ ವರ್ಷದಲ್ಲಿಯೇ, ಜಿಲ್ಲೆಗಳಲ್ಲಿ ಮೊಬೈಲ್ ಆಸ್ಪತ್ರೆಗಳನ್ನು ಮಾಡಲು ನಾವು ಪರಿಶೀಲನೆ ಮಾಡುತ್ತೇವೆ.

ಬಸವಕಲ್ಯಾಣ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಗದ್ದೆಗಾಂವ್ (ಬ) ಗ್ರಾಮಕ್ಕೆ ಬಿ.ಸಿ.ಎಂ. ವಸತಿ ನಿಲಯ

106 (1008) ಶ್ರೀ ಎಂ.ಜಿ. ಮುಳೆ (ಬಸವಕಲ್ಯಾಣ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಗದ್ದೆಗಾಂವ್ (ಬಿ) ಗ್ರಾಮಕ್ಕೆ ಬಿಸಿಎಂ ನಿಲಯವನ್ನು ಯಾವಾಗ ಮಂಜೂರು ಮಾಡಲಾಯಿತು ;

ಆ) ಈ ವಸತಿ ನಿಲಯದ ನಿರ್ಮಾಣ ಕಾರ್ಯ ಯಾವಾಗ ಪ್ರಾರಂಭವಾಯಿತು; ಈ ಕೆಲಸ ಈಗ ಯಾವ ಹಂತದಲ್ಲಿದೆ;

ಇ) ಈ ವಸತಿ ನಿಲಯದ ನಿರ್ಮಾಣ ಕಾರ್ಯ ಅಪೂರ್ಣವಾಗಿರುವುದು ನಿಜವೇ; ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು; ಎಷ್ಟು ದಿನಗಳಿಂದ ಈ ಕಾರ್ಯ ಅಪೂರ್ಣವಾಗಿದೆ;

ಈ) ಇನ್ನು ಎಷ್ಟು ಅವಧಿಯಲ್ಲಿ ಈ ವಸತಿ ನಿಲಯದ ಕಾಮಗಾರಿಯನ್ನು ಪೂರ್ಣಗೊಳಿಸಿ ವಸತಿ ನಿಲಯವನ್ನು ಪ್ರಾರಂಭಿಸಲಾಗುವುದು ?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಗದಲಿಗಾಂ ಮೆಟ್ರಿಕ್ ಪೂರ್ವ ಬಾಲಕರ ನಿಲಯ 1998-99ನೇ ಸಾಲಿನಲ್ಲಿ ಮಂಜೂರಾಗಿರುತ್ತದೆ.

ಆ) ಈ ವಿದ್ಯಾರ್ಥಿ ನಿಲಯದ ಕಾಮಗಾರಿಯು 1999-2000ನೇ ಸಾಲಿನಲ್ಲಿ ಕೈಗೆತ್ತಿಕೊಳ್ಳಲಾಗಿದೆ. ಈಗ ಕಾಮಗಾರಿಯ ಛಾವಣಿಯ ಕೆಲಸ ಪೂರ್ಣಗೊಂಡಿದೆ.

ಇ) ಹೌದು, ನೆಲಹಾಸು, ನೀರು ಮತ್ತು ವಿದ್ಯುಚ್ಛಕ್ತಿ ಪೇಂಟಿಂಗ್ ಕೆಲಸ ಬಾಕಿ ಇರುತ್ತದೆ. ಈ ಕಾರ್ಯಗಳಿಗೆ ರೂ. 5.65 ಲಕ್ಷಗಳ ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ ಹಣವನ್ನು ಬಿಡುಗಡೆ ಮಾಡಲಾಗುವುದು. ಕಳೆದ ಒಂದು ವರ್ಷದಿಂದ ಈ ಕಾರ್ಯ ಬಾಕಿಯಿರುತ್ತದೆ.

ಈ) ಇನ್ನು ಮೂರು ತಿಂಗಳ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಿ ನಿಲಯವನ್ನು ಪ್ರಾರಂಭಿಸಲಾಗುವುದು.

ಶ್ರೀ ಎಂ.ಜಿ. ಮುಳೆ :- ಸನ್ಮಾನ್ಯ ಅಧ್ಯಕ್ಷರೇ, ನನ್ನ ಕ್ಷೇತ್ರದಲ್ಲಿ, ಹಿಂದುಳಿದ ವರ್ಗದ ಮಕ್ಕಳ ಸಲುವಾಗಿ ಬಿ.ಸಿ.ಎಂ. ಹಾಸ್ಟೆಲ್ ಬಗ್ಗೆ ಪ್ರಶ್ನೆಯನ್ನು ಕೇಳಿದ್ದೇನೆ. ಅದರ ಕಟ್ಟಡವನ್ನು ಕಟ್ಟಲು ಏಕಿಷ್ಟು ತಡವಾಯಿತು ಎನ್ನುವುದಕ್ಕೆ ಕಾರಣಗಳನ್ನು ಹೇಳಿಲ್ಲ. ಅದಕ್ಕೆ ಅಡ್ಮಿನಿಸ್ಟ್ರೇಟಿವ್ ಅಪ್ರೂವಲ್ ಯಾವಾಗ ಕೊಡುತ್ತಾರೆ ಎನ್ನುವುದನ್ನೂ ಹೇಳಿಲ್ಲ. ಇವೆರಡು ಪ್ರಶ್ನೆಗಳಿಗೆ ಉತ್ತರ ಹೇಳಬೇಕು ಎಂದು ಕೇಳುತ್ತಿದ್ದೇನೆ.

ಶ್ರೀ ಎ. ಕೃಷ್ಣಪ್ಪ :- ಮಾನ್ಯ ಅಧ್ಯಕ್ಷರೇ, ಸದಸ್ಯರ ಪ್ರಶ್ನೆಗೆ ಉತ್ತರವಾಗಿ ಈ ವಿದ್ಯಾರ್ಥಿನಿಲಯದ ಕಾಮಗಾರಿಯು 1999-2000ನೇ ಸಾಲಿನಲ್ಲಿ ಕೈಗೆತ್ತಿಕೊಳ್ಳಲಾಗಿದೆ. ಈಗ ಕಾಮಗಾರಿಯ ಛಾವಣಿಯ ಕೆಲಸ ಪೂರ್ಣಗೊಂಡಿದೆ. ನೆಲಹಾಸು, ನೀರು ಮತ್ತು ವಿದ್ಯುಚ್ಛಕ್ತಿ, ಪೇಂಟಿಂಗ್ ಕೆಲಸ ಬಾಕಿ ಇರುತ್ತದೆ. ಈ ಕಾರ್ಯಗಳಿಗೆ 5.65 ಲಕ್ಷ ರೂಪಾಯಿಗಳ ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ ಹಣವನ್ನು ಬಿಡುಗಡೆ ಮಾಡಲಾಗುವುದು. ಮುಂದಿನ ಮೂರು ತಿಂಗಳ ಅವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸಲಾಗುವುದು ಎಂದು ಹೇಳಿದ್ದೇವೆ. ಅದರ ಪ್ರಕಾರ ಮಾಡುತ್ತೇವೆ.

ಸಣ್ಣ ಕೈಗಾರಿಕೆಗಳಿಗೆ ನೀಡಬೇಕಾಗಿರುವ ಸಹಾಯಧನ

108 (1147) ಶ್ರೀ ಯು.ಆರ್. ಸಭಾಪತಿ (ಉಡುಪಿ) ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ 3 ವರ್ಷಗಳಿಗೆ ಸಂಬಂದಿಸಿದಂತೆ ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳಿಗೆ ರಾಜ್ಯ ಸರ್ಕಾರದಿಂದ ಪಾವತಿಯಾಗಲು ಬಾಕಿಯಿರುವ ಸಹಾಯಧನದ ವಿವರಗಳನ್ನು ಜಿಲ್ಲಾವಾರು ನೀಡುವುದು ;

ಆ) ಈ ಸಹಾಯಧನ ಪಾವತಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

ಇ) ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗೆ ಸರ್ಕಾರ ಹಾಕಿಕೊಂಡ ಯೋಜನೆಗಳೇನು ?

ಶ್ರೀ ಆರ್. ರೋಷನ್ ಬೇಗ್ (ಸಣ್ಣ ಪ್ರಮಾಣದ ಕೈಗಾರಿಕಾ ಸಚಿವರು) :

ಅ) ಕಳೆದ 3 ವರ್ಷಗಳಿಗೆ ಸಂಬಂಧಿಸಿದಂತೆ, ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳಿಗೆ ರಾಜ್ಯ ಸರ್ಕಾರದಿಂದ ಪಾವತಿಯಾಗಲು ಬಾಕಿಯಿರುವ ಸಹಾಯಧನದ ಜಿಲ್ಲಾವಾರು ವಿವರಗಳನ್ನು ಅನುಬಂಧ-1ರಲ್ಲಿ ಲಗತ್ತಿಸಲಾಗಿದೆ.

ಆ) ಪೂರ್ಣ ಸಹಾಯಧನವನ್ನು ನೀಡಲು ಎಲ್ಲ ಪ್ರಯತ್ನ ಮಾಡಲಾಗುತ್ತಿದೆ.

ಇ) 2001-06ರ ಕೈಗಾರಿಕಾ ನೀತಿಯಂತೆ ಸಣ್ಣ ಕೈಗಾರಿಕಾ ಬೆಳವಣಿಗೆಗೆ ಹಲವಾರು ಕ್ರಮಗಳನ್ನು ಕೈಗೊಳ್ಳಲಾಗಿದೆ. ವಿವರಗಳು ಕೆಳಕಂಡಂತಿದೆ:

ಅ) ರಾಜ್ಯದ ಎಲ್ಲಾ ಅತಿ ಸಣ್ಣ ಕೈಗಾರಿಕೆಗಳಿಗೆ ಬಿ, ಸಿ ಮತ್ತು ಡಿ ವಲಯಗಳಲ್ಲಿ ಹಾಗೂ ಡಿ ವಲಯದಲ್ಲಿರುವ ಸಣ್ಣ ಕೈಗಾರಿಕೆಗಳಿಗೆ ಬಂಡವಾಳ ಸಹಾಯಧನ ನೀಡಲಾಗುವುದು.

ಆ) ಕೈಗಾರಿಕಾ ನೀತಿಯಲ್ಲಿ ತಿಳಿಸಿರುವಂತೆ, ಪ್ರವೇಶ ತೆರಿಗೆ ವಿನಾಯಿತಿ ನೀಡುವುದು.

ಇ) ಕೈಗಾರಿಕಾ ನೀತಿಯಲ್ಲಿ ತಿಳಿಸಿರುವಂತೆ, ಮುದ್ರಾಂಕ ಶುಲ್ಕ ವಿನಾಯಿತಿ ಹಾಗೂ ರಿಯಾಯಿತ ದರ ನೀಡುವುದು.

ಈ) ಖರೀದಿಯಲ್ಲಿ ಆದ್ಯತೆ ಹಾಗೂ ಶೇ. 15 ರಷ್ಟು ದರ ಪ್ರಾಮುಖ್ಯತೆ ನೀಡಲಾಗುವುದು.

ಈ ಪ್ರೋತ್ಸಾಹಗಳನ್ನು ನೀಡುವುದರ ಜೊತೆಗೆ, ಸಣ್ಣ ಪ್ರಮಾಣದ ಕೈಗಾರಿಕೆ ಬೆಳವಣಿಗೆಗಾಗಿ 2001-06ರ ಜಿಲ್ಲಾ ಕೈಗಾರಿಕಾ ಮುನ್ನೋಟ ಯೋಜನೆಯನ್ನು ರೂಪಿಸಲಾಗಿದೆ. ತಾಂತ್ರಿಕ ಉನ್ನತೀಕರಣ ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಹೆಚ್ಚಿನ ಒತ್ತು ನೀಡಲಾಗಿದೆ.